RAITHA GEETHE

ಉಳುವಾ ಯೋಗಿಯ ನೋಡಲ್ಲಿ

ಫಲವನು ಬಯಸದೆ ಸೇವೆಯ ಪೂಜೆಯು
ಕರ್ಮವೆ ಇಹಪರ ಸಾಧನವು
ಕಷ್ಟದೊಳನ್ನವ ದುಡಿವನೆ ತ್ಯಾಗಿ
ಸೃಷ್ಟಿನಿಯಮದೊಳಗವನೇ ಭೋಗಿ

ಉಳುವಾ ಯೋಗಿಯ ನೋಡಲ್ಲಿ

ಲೋಕದೊಳೇನೇ ನಡೆಯುತಿರಲಿ
ತನ್ನೀ ಕಾರ್ಯವ ಬಿಡನೆಂದೂ
ರಾಜ್ಯಗಳುಳಿಸಲಿ ರಾಜ್ಯಗಳಳಿಯಲಿ
ಹಾರಲಿ ಗದ್ದುಗೆ ಮುಕುಟಗಳು
ಮುತ್ತಿಗೆ ಹಾಕಲಿ ಸೈನಿಕರೆಲ್ಲ
ಬಿತ್ತುಳುವುದನವ ಬಿಡುವುದೆ ಇಲ್ಲ

ಉಳುವಾ ಯೋಗಿಯ ನೋಡಲ್ಲಿ

ಬಾಳಿತು ನಮ್ಮೀ ನಾಗರಿಕತೆ ಸಿರಿ
ಮಣ್ಣೋಣಿ ನೇಗಿಲಿನಾಶ್ರಯದಿ
ನೇಗಿಲ ಹಿಡಿದ ಕೈಯಾದಾರದಿ
ದೊರೆಗಳು ದರ್ಪದೊಳಾಳಿದರು
ನೇಗಿಲ ಬಲದೊಳು ವೀರರು ಮೆರೆದರು
ಶಿಲ್ಪಿಗಳೆಸೆದರು, ಕವಿಗಳು ಬರೆದರು

ಉಳುವಾ ಯೋಗಿಯ ನೋಡಲ್ಲಿ

ಯಾರೂ ಅರಿಯದ ನೇಗಿಲ ಯೋಗಿಯೆ
ಲೋಕಕೆ ಅನ್ನವನೀಯುವನು
ಹೆಸರನು ಬಯಸದೆ ಅತಿಸುಖ ಗಳಿಸದೆ
ದುಡಿದವನು ಗೌರವಕಾಶಿಸದೆ
ನೇಗಿಲ ಕುಲದೊಳಗಡಗಿದೆ ಕರ್ಮ
ನೇಗಿಲ ಮೇಲೆಯೆ ನಿಂತಿದೆ ಧರ್ಮ

ಉಳುವಾ ಯೋಗಿಯ ನೋಡಲ್ಲಿ